ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 170 (244) |
| ಉತ್ತರಿಸುವ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 10-12-2024 |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಕೈಮಗ್ಗ ನೇಕಾರ ಸಹಕಾರ ಸಂಘಗಳು ಉತ್ಪಾದಿಸುವ ವಸ್ತುಗಳ (ಮಾಲುಗಳ) ಮಾರಾಟಕ್ಕೆ ಶೇಕಡಾ 20 ರಷ್ಟು ರಿಯಾಯಿತಿ ಪ್ರೋತ್ಸಾಹ (ರಿಬೇಟ್) ನೀಡಲಾಗುತ್ತಿರುವುದು ಸರಿಯಷ್ಟೆ. ಆದರೆ, ಅದರಿಂದ ವಾಸ್ತವವಾಗಿ ನೇಕಾರರಿಗೆ ಯಾವುದೇ ಸಮರ್ಪಕ ಪ್ರತಿಫಲ ಸಿಗದಂತಾಗುತ್ತಿದ್ದು, ಅದನ್ನು ಶೇಕಡ 40 ಕ್ಕೆ ವಿಸ್ತರಿಸಬೇಕು ಎಂದು ಹಲವಾರು ವರ್ಷಗಳಿಂದ ಬೇಡಿಕೆ ಇದ್ದು, ಸರ್ಕಾರ ನೇಕಾರರ ಸಹಕಾರ ಸಂಘಗಳ ಉಳುವಿಗಾಗಿ 40% ಸಬ್ಸಿಡಿ (ರಿಯಾಯಿತಿ) ನೀಡುವ ಕ್ರಮಕ್ಕೆ ಮುಂದಾಗುವುದೇ; | ಕೈಮಗ್ಗ ನೇಕಾರರ ಸಹಕಾರಿ ಸಂಘಗಳು / ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ / ಕೈಮಗ್ಗ ನೇಕಾರರ ಮಹಾಮಂಡಳಗಳಿಗೆ ಪ್ರಸ್ತುತ ಕೈಮಗ್ಗ ಉತ್ಪನ್ನಗಳ ಮಾರಾಟದ ಮೇಲೆ ಶೇ.20 ರ ರಿಬೇಟ್ ಪ್ರೋತ್ಸಾಹ ಸಹಾಯಧನವನ್ನು ಶೇ.40 ಕ್ಕೆ ಹೆಚ್ಚಿಸುವ ಕುರಿತ ಬೇಡಿಕೆಯು ಪರಿಶೀಲನಾ ಹಂತದಲ್ಲಿದೆ. |
| (ಆ) | ಕೈಮಗ್ಗ ನೇಕಾರರಿಗೆ ಪ್ರೋತ್ಸಾಹ ನೀಡುವ ದಿಶೆಯಲ್ಲಿ ಕೈಮಗ್ಗ ನೇಕಾರಿಕೆ ಉದ್ಯೋಗದ ಉಳುವಿಗಾಗಿ ಸರ್ಕಾರದ ಎಲ್ಲಾ ಇಲಾಖೆಗಳ ಸಿಬ್ಬಂದಿಗಳು ಕೈಮಗ್ಗ ಉತ್ಪಾದಿತ ವಸ್ತುಗಳನ್ನು ಖರೀದಿಸಲು ಸರ್ಕಾರ ಆದೇಶ ಮಾಡಲಾಗುವುದೇ; | ಸರ್ಕಾರದ ಆದೇಶ ಸಂಖ್ಯೆ: CI 108 JAKY 2022, ದಿನಾಂಕ: 22-12-2022 ರನ್ವಯ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮಕ್ಕೆ ಕರ್ನಾಟಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಕಲಂ 4(ಹೆಚ್) ರಲ್ಲಿ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮಕ್ಕೆ ಈಗಾಗಲೇ ವಿನಾಯಿತಿ ನೀಡಿದ್ದು, ಅದರಂತೆ, ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಆರಕ್ಷಕ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸಾರಿಗೆ ಇಲಾಖೆ, ಸಾರಿಗೆ ಇಲಾಖೆಯ ವಿವಿಧ ನಿಗಮಗಳು, ಅರಣ್ಯ ಇಲಾಖೆ, ಇಂಧನ ಇಲಾಖೆಯ ಅಡಿಯಲ್ಲಿನ ನಿಗಮಗಳೂ ಮತ್ತು ಇತರೆ ಎಲ್ಲಾ ಇಲಾಖೆಗಳೂ ತಮ್ಮ ಅಗತ್ಯವಿರುವ ಸಮವಸ್ತ್ರ ಬೇಡಿಕೆಯ ಶೇ.25 ರಷ್ಟರಲ್ಲಿ ಶೇ.75 ರಷ್ಟು ಸಮವಸ್ತ್ರಗಳನ್ನು ಈ ನಿಗಮದಿಂದಲೇ ಖರೀದಿಸುವಂತೆ ಆದೇಶಿಸಲಾಗಿರುತ್ತದೆ. |

...2

| | | |
|---|---|---|
| (ಇ) | ವೃತ್ತಿಪರ ನೇಕಾರರನ್ನು ಕಾರ್ಮಿಕರೆಂದು ಪರಿಗಣಿಸಬೇಕೆಂದು ಅನೇಕ ವರ್ಷಗಳಿಂದ ನೇಕಾರರ ಬೇಡಿಕೆ ಇದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು) | ವೃತ್ತಿಪರ ನೇಕಾರರನ್ನು ಕಾರ್ಮಿಕರೆಂದು ಪರಿಗಣಿಸಲು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ನೇಕಾರ ವೃತ್ತಿಯಲ್ಲಿ ತೊಡಗಿರುವ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಹಾಗೂ ಕಲ್ಯಾಣ ಕಾರ್ಯಕ್ರಮಗಳನ್ನು ರೂಪಿಸಲು ನೇಕಾರರನ್ನೊಳಗೊಂಡ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ನೀಡಲು ಇಲಾಖೆಯಲ್ಲಿ / ಲಭ್ಯವಿರುವ ನೇಕಾರರ ಮಾಹಿತಿಯನ್ನೊಳಗೊಂಡ ದತ್ತಾಂಶವನ್ನು ಒದಗಿಸುವಂತೆ ಆಯುಕ್ತರು, ಕಾರ್ಮಿಕ ಇಲಾಖೆ ಇವರು ತಿಳಿಸಿರುತ್ತಾರೆ. ಕೈಮಗ್ಗ ಹಾಗೂ ವಿದ್ಯುತ್ ಮಗ್ಗ ನೇಕಾರರ ಮಾಹಿತಿಯ ದತ್ತಾಂಶವನ್ನು ಕಾರ್ಮಿಕ ಇಲಾಖೆಗೆ ಕಳುಹಿಸಿಕೊಡಲಾಗಿದೆ. |

ಸಂಖ್ಯೆ: **CI 247 JAKE 2024**

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು